### ಸಿ.ಎನ್.ಅಶ್ವತ್ಥನಾರಾಯಣ ಕಿವಿಮಾತು

# ವಿದ್ಯಾರ್ಥಿಗಳಿಗೆ ಬೇಕಿದೆ ಸತತ ಅಧ್ಯಯನ: ಸಚಿವ



**ಆನೇಕಲ್:** ಪದವಿ ಪಡೆದ ವಿದ್ಯಾರ್ಥಿಗಳು ಪದವಿಯ ಜೊತೆಗೆ ನೈತಿಕತೆಯನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶಿಕ್ಷಣದ ಜೊತೆಗೆ ಸಮಾಜದ ಸತ್ಪ್ರಜೆಗಳಾಗಿ ಸಮಾಜಕ್ಕೆ ಕೊಡುಗೆ ನೀಡಬೇಕು ಎಂದು ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವಥನಾರಾಯಣ್ ತಿಳಿಸಿದರು.

ಅವರು ಪಟ್ಟಣಕ್ಕೆ ಸಮೀಪದ ಅಲಯನ್ಸ್ ವಿಶ್ವವಿದ್ಯಾಲಯದಲ್ಲಿ ಶನಿವಾರ ಆಯೋಜಿಸಿದ್ದ ಪದವಿ ಪ್ರದಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

21ನೇ ಶತಮಾನ ಜ್ಞಾನದ ಯುಗವಾಗಿದ್ದು ಇಲ್ಲಿ ಜ್ಞಾನದಿಂದ ಮಾತ್ರ ಎಲ್ಲವನ್ನು ಸಾಧಿಸಬಹುದಾಗಿದೆ. ಭವಿಷ್ಯದ ಸವಾಲುಗಳನ್ನು ಎದುರಿಸಲು ಮತ್ತು ಜ್ಞಾನದ ಉನ್ನತೀಕರಣ ಮಾಡಿಕೊಳ್ಳಲು ಶ್ರದ್ಧೆ, ಸತತ ಅಧ್ಯಯನ ಅವಶ್ಯಕವಾಗಿದೆ. ಅವಕಾಶಗಳನ್ನು ಬಳಸಿ ಉನ್ನತ ಸಾಧನೆ ಮಾಡುವತ್ತ ಗಮನ ಹರಿಸಬೇಕು ಎಂದರು.

ಸಮಾಜಕ್ಕೆ ಕೊಡುಗೆ ನೀಡುವ ಗುಣಗಳನ್ನು ಬೆಳೆಸಿಕೊಳ್ಳಬೇಕಾದುದ್ದು ಯುವಕರ ಜವಬ್ದಾರಿಯಾಗಿದೆ. ಪ್ರತಿಯೊಬ್ಬರು ತಮ್ಮ ಶಕ್ತಿ ಮತ್ತು ದೌರ್ಬಲ್ಯಗಳ ಬಗ್ಗೆ ಗಮನ ಹರಿಸಿ ದೌರ್ಬಲ್ಯಗಳನ್ನು ಕಡಿಮೆ ಮಾಡಿಕೊಂಡು ದೊರೆಯುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಸಮಾಜ, ಶಿಕ್ಷಣ ಸಂಸ್ಥೆಗಳು, ಪ್ರಾಧ್ಯಾಪಕರು, ವಿದ್ಯಾರ್ಥಿಗಳು, ಕೈಗಾರಿಕೆಗಳು, ಸರ್ಕಾರಗಳು ಶಿಕ್ಷಣ ವ್ಯವಸ್ಥೆಯನ್ನು ಬಲಪಡಿಸಲು ಆದ್ಯತೆ ನೀಡಿವೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶೈಕ್ಷಣಿಕ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ. ಸರ್ಕಾರ ಟೆಕ್ ಸಮ್ಮಿತ್, ಸ್ಕಿಲ್ ಕನೆಕ್ಟ್ ಮೂಲಕ ಕೌಶಲ್ಯ ಅಭಿವೃದ್ಧಿಯನ್ನು ಪಡೆಯಲು ಅನುಕೂಲ ಕಲ್ಪಿಸಿದೆ.

ಅಲಯನ್ಸ್ ವಿಶ್ವವಿದ್ಯಾಲಯದ ಸಹ ಕುಲಪತಿ ಅಭಯ್ ಛೆಬ್ಬಿ ಮಾತನಾಡಿ ಗುಣಮಟ್ಟದ ಶಿಕ್ಷಣ ನೀಡಬೇಕು ಎಂಬುದು ನಮ್ಮ ಗುರಿಯಾಗಿದೆ. ಈ ನಿಟ್ಟಿನಲ್ಲಿ 25 ವರ್ಷಗಳಿಂದ ವಿಶ್ವ ಮಟ್ಟದ ಗುಣಾತ್ಮಕ ಶಿಕ್ಷಣ ನೀಡಲಾಗುತ್ತಿದೆ. ವಿಶ್ವಮಟ್ಟದ ಶಿಕ್ಷಣ ನೀಡಬೇಕು ಎಂಬುದು ನಮ್ಮ ಗುರಿಯಾಗಿದೆ. ಯುವ ಸಮುದಾಯದಲ್ಲಿ ನಾಯಕತ್ವ ಗುಣಗಳನ್ನು ಬೆಳೆಸುವುದು ನಮ್ಮ ಮೂಲ ಉದ್ದೇಶವಾಗಿದೆ ಎಂದರು.

ಕಾರ್ಯಕ್ರಮದಲ್ಲಿ 2000 ಮಂದಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. 20 ಮಂದಿ ವಿದ್ಯಾರ್ಥಿಗಳು ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ. ಕರ್ನಾಟಕ ಕಾನೂನು ಪ್ರಾಧಿಕಾರದ ಅಧ್ಯಕ್ಷ ಜಸ್ಟೀಸ್ ಎಸ್.ಆರ್.ಬನ್ನೂರ ಮಠ್, ಉದ್ಯಮಿ ಹರ್ಷಿತ್ ಸಿಂಘಾಲ್, ಅಲಯನ್ಸ್ ವಿಶ್ವವಿದ್ಯಾಲಯ ಕುಲಪತಿ ಪ್ರೇಮಾನಂದ್ ಶೆಟ್ಟಿ, ವಿಶ್ವವಿದ್ಯಾಲಯದ ಅನುಬಾ ಸಿಂಗ್, ಡಾ.ಪುನಿತ್ ಕರಿಯಪ್ಪ, ಸುರೇಖಾ ಶೆಟ್ಟಿ ಇದ್ದರು.